# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 74(21) |
| ಮಾನ್ಯ ಸದಸ್ಯರ ಹೆಸರು | : | ಶ್ರೀ. ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ) | ರಾಜ್ಯದ ಆಯುಷ್ ಇಲಾಖೆ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕು ಮತ್ತು ಜಿಲ್ಲಾ ಆಯುಷ್ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರುಗಳ ಸೇವೆಯನ್ನು ಒದಗಿಸುವಂತೆ ಸಾರ್ವಜನಿಕರಿಂದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಇಲ್ಲ |
| ಆ) | ಬಂದಿದ್ದಲ್ಲಿ, ಸದರಿ ಇಲಾಖೆಯಲ್ಲಿ ಸೃಜನೆಯಾಗಿರುವ ಮೂಲ ಹುದ್ದೆಗಳೆಷ್ಟು; ಬೇಡಿಕೆಯನುಸಾರ ಕಳೆದ 10 ವರ್ಷಗಳಲ್ಲಿ ಸೃಜನೆ ಮಾಡಿರುವ ತಜ್ಞವೈದ್ಯರು, ಅರೆ ವೈದ್ಯಕೀಯ ಮತ್ತು ಇತರೆ ಸಿಬ್ಬಂದಿಗಳ ಹುದ್ದೆಗಳೆಷ್ಟು ಮತ್ತು ಇತ್ತೀಚಿನ ಅಗತ್ಯಕ್ಕನುಗುಣವಾಗಿ ಹುದ್ದೆಗಳನ್ನು ಸೃಜನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು) | ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆ ಯಡಿಯಲ್ಲಿ ತಜ್ಞ ವೈದ್ಯರುಗಳ ಹುದ್ದೆಯು ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಯಾಗಿರುತ್ತದೆ. ಸದರಿ ಯೋಜನೆಯು ಅಸ್ತಿತ್ವದಲ್ಲಿರುವವರೆಗೂ ಮಾತ್ರ ಈ ಹುದ್ದೆಗಳು ಚಾಲ್ತಿಯಲಿರುತ್ತದೆ. |
| ಇ) | ಕೇಂದ್ರ ಸರ್ಕಾರದ ರಾಷ್ಟ್ರೀಯ ಆಯುಷ್ ಅಭಿಯಾನ (NAM) ಯೋಜನೆಯಡಿಯಲ್ಲಿ ಅನುದಾನ ಪಡೆದು ರಾಜ್ಯದಲ್ಲಿ ಅಭಿವೃದ್ಧಿ ಪಡಿಸಿರುವ ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳ ವಿವರ ನೀಡುವುದು; ಈ ಆಸ್ಪತ್ರೆಗಳಲ್ಲಿ ಲಭ್ಯವಿರುವ IPD beds ಎಷ್ಟು ಮತ್ತು ಈ ಆಸ್ಪತ್ರೆಗಳಲ್ಲಿ ಒಳರೋಗಿ ವಿಭಾಗದಲ್ಲಿ ದಾಖಲಾಗಿರುವ ರೋಗಿಗಳ ಸಂಖ್ಯೆ ಎಷ್ಟು; (ಕಳೆದ 5 ವರ್ಷಗಳ ಮಾಹಿತಿ ನೀಡುವುದು) | ರಾಷ್ಟ್ರೀಯ ಆಯುಷ್ ಅಭಿಯಾನ (NAM) ಯೋಜನೆಯಡಿ ಆಯುಷ್ ಪದ್ಧತಿಗಳಲ್ಲಿ ಜಿಲ್ಲಾ ಕೇಂದ್ರ ಸ್ಥಾನದಲ್ಲಿ 20, ತಾಲ್ಲೂಕು ಕೇಂದ್ರ ಸ್ಥಾನದಲ್ಲಿ 60 ಹಾಗೂ ಇತರೆ ಪ್ರದೇಶಗಳಲ್ಲಿ 01 ಆಸ್ಪತ್ರೆಯನ್ನು ಅಭಿವೃದ್ಧಿಪಡಿಸಲಾಗಿದೆ.<br><br>ಸದರಿ ಆಸ್ಪತ್ರೆಗಳಲ್ಲಿ 805 IPD beds ಲಭ್ಯವಿದ್ದು, ಈ ಆಸ್ಪತ್ರೆಗಳಲ್ಲಿ ಕಳೆದ 5 ವರ್ಷಗಳಲ್ಲಿ ಒಳರೋಗಿಗಳ ವಿಭಾಗದಲ್ಲಿ ದಾಖಲಾಗಿರುವ ರೋಗಿಗಳ ಸಂಖ್ಯೆ ಕೆಳಕಂಡಂತಿರುತ್ತದೆ. |

| Year | Total |
|---|---|
| 2018-19 | 27604 |
| 2019-20 | 38238 |
| 2020-21 | 5628 |
| 2021-22 | 16932 |
| 2022-23 (ಜನವರಿ-2022ರವರೆಗೆ) | 38962 |

| | | |
|---|---|---|
| ಈ) | ಈ ಆಸ್ಪತ್ರೆಗಳಲ್ಲಿ ಒಳರೋಗಿಗಳಿಗೆ ಚಿಕಿತ್ಸೆ ನೀಡುವ ಎಲ್ಲಾ ಸೌಲಭ್ಯಗಳು ಲಭ್ಯವಿದ್ದರೂ ಒಳರೋಗಿಗಳನ್ನು ದಾಖಲು ಮಾಡಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಆಸ್ಪತ್ರೆಗಳಲ್ಲಿ ಒಳರೋಗಿಗಳನ್ನು ದಾಖಲು ಮಾಡಿಕೊಳ್ಳದಿರಲು ಕಾರಣಗಳೇನು ಮತ್ತು ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ರಾಷ್ಟ್ರೀಯ ಆಯುಷ್ ಅಭಿಯಾನದಡಿ ಮೇಲ್ದರ್ಜೆಗೇರಿಸಲಾದ ಬಹುತೇಕ ಆಯುಷ್ ಆಸ್ಪತ್ರೆಗಳಲ್ಲಿ ಒಳರೋಗಿಗಳನ್ನು ದಾಖಲು ಮಾಡಿಕೊಳ್ಳಲಾಗುತ್ತಿದ್ದು, ಇನ್ನುಳಿದ ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸುವಂತೆ ಇಲಾಖೆಯಿಂದ ಹೊರಡಿಸಿರುವ ಅಧಿಕೃತ ಜ್ಞಾಪನ ಪ್ರತಿಯನ್ನು ಲಗತ್ತಿಸಿದೆ. |
| ಉ) | ರಾಜ್ಯದ ಆಯುಷ್ ಇಲಾಖೆಯಲ್ಲಿ ಸಿ ಅಂಡ್ ಆರ್ ನಿಯಮಗಳನ್ನು ರೂಪಿಸಿಕೊಂಡಿದೆಯೇ ನಿಯಮಾನುಸಾರ ಸಿ ಅಂಡ್ ಆರ್ ನಿಯಮಗಳು ಕಾಲಕಾಲಕ್ಕೆ ಪರಿಷ್ಕರಿಸಲಾಗಿದೆಯೇ? (ಸಿ ಅಂಡ್ ಆರ್ ನಿಯಮಗಳ ಸಹಿತ ಮಾಹಿತಿ ನೀಡುವುದು) | ಹೌದು. ಸರ್ಕಾರದ ಅಧಿಸೂಚನೆ ಸಂಖ್ಯೆ: HFW 218 PIM 2008, Dated:19-11-2012ರನ್ವಯ ಬೋಧಕೇತರ ವರ್ಗಕ್ಕೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊರಡಿಸಲಾಗಿರುತ್ತದೆ (ಪ್ರತಿ ಲಗತ್ತಿಸಿದೆ).<br><br>ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆಯು ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಆಕುಕ 58 ಪಿಐಎಂ 2023**

**(ಡಾ|| ಕೆ.ಸುಧಾಕರ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು